ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವುದು

2546 (2990) ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ರಾಜ್ಯದಲ್ಲಿರುವ ಎಷ್ಟು ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಲು ವಿಶ್ವಬ್ಯಾಂಕ್‌ನಿಂದ ಎಷ್ಟು ಹಣವನ್ನು ಪಡೆಯಲಾಗಿದೆ?

ಆ. ವಿಶ್ವಬ್ಯಾಂಕ್‌ನಿಂದ ಇದುವರೆವಿಗೆ ಬಿಡುಗಡೆಯಾಗಿರುವ ಹಣ ಎಷ್ಟು; ಈ ಆಸ್ಪತ್ರೆಗಳ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ?

ಇ. ಸರ್ಕಾರ ನಿರ್ಮಾಣ ಕಾರ್ಯ ಮುಗಿಸಲು ಏನಾದರೂ ಮಾರ್ಗಸೂಚಿ ಅನುಸರಿಸಿದೆಯೇ?

ಈ. ವಿಶ್ವಬ್ಯಾಂಕ್ ವಿಧಿಸಿರುವ ಷರತ್ತುಗಳಿಗೆ ಒಳಪಟ್ಟು ಯಾವುದೇ ಲೋಪವಿಲ್ಲದೆ ನಿರ್ಮಾಣ ಕಾರ್ಯ ನಡೆದಿದೆಯೇ?

ಡಾ. ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ. ರಾಜ್ಯದ ಬೆಂಗಳೂರು-ಮೈಸೂರು ಮತ್ತು ಬೆಳಗಾಂ ಕಂದಾಯ ವಿಭಾಗಗಳ 200 ಹಾಗೂ ಗಲ್ಬರ್ಗ ವಿಭಾಗದ 4 ಒಟ್ಟು 204 ದ್ವಿತೀಯ ಹಂತದ ಆಸ್ಪತ್ರೆಗಳ ನವೀಕರಣ ಹಾಗೂ ವಿಸ್ತರಣೆಗಾಗಿ ವಿಶ್ವ ಬ್ಯಾಂಕಿನಿಂದ ರೂ.461.00 ಕೋಟಿ ನೆರವನ್ನು ಪಡೆಯಲಾಗುತ್ತಿದೆ.

ಆ. ಇದುವರೆಗೆ ವಿಶ್ವ ಬ್ಯಾಂಕ್‌ನಿಂದ ರೂ.296.57 ಕೋಟಿ (ರೂ.239.90 ಕೋಟಿಗಳು ಕಾಮಗಾರಿಗಳಿಗಾಗಿ) ಬಿಡುಗಡೆಯಾಗಿರುತ್ತದೆ. 140 ಆಸ್ಪತ್ರೆಗಳ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದವು ಪ್ರಗತಿಯಲ್ಲಿವೆ. ಯೋಜನಾ ಅವಧಿಯೊಳಗೆ ಇವುಗಳನ್ನು ಪೂರ್ಣಗೊಳಿಸಲಾಗುವುದು.

ಇ) ಕಟ್ಟಡಗಳ ನಿರ್ಮಾಣದ ಬಗ್ಗೆ ಮಾರ್ಗಸೂಚಿಗಳನ್ನು ಹಾಗೂ ಷರತ್ತುಗಳನ್ನು ಗುತ್ತಿಗೆ ಕರಾರು ಪತ್ರದಲ್ಲಿ ನಿಗದಿಪಡಿಸಲಾಗಿದೆ. ಗುತ್ತಿಗೆದಾರರು ಸದರಿ ಷರತ್ತುಗಳಿಗೆ ಒಳಪಟ್ಟು ನಿರ್ಮಾಣ ಕಾರ್ಯವನ್ನು ಮಾಡಬೇಕಾಗಿದೆ. ಹಾಗೂ ಗುತ್ತಿಗೆ ಕರಾರು ಪತ್ರದಲ್ಲಿ ನಿಗಧಿಪಡಿಸಿರುವ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿದೆ. ವುದರಲ್ಲಿ ತಡವಾದರೆ ಕರಾರಿನಂತೆ ದಂಡ ವಿಧಿಸಲಾಗುತ್ತಿದೆ ಹಾಗೂ ಇತರ ದಂಡನೆ ವಿಧಾನಗಳನ್ನು ಅನುಸರಿಸಲಾಗುತ್ತಿದೆ.

ಈ) ಹೌದು.